ಕರ್ನಾಟಕ ಸರ್ಕಾರ

ಸಂಖ್ಯೆ: ಗ್ರಾಅಪ 118 ಇತರೆ 2012

ಕರ್ನಾಟಕ ಸರ್ಕಾರದ ಸಚಿವಾಲಯ,
ಬಹುಮಹಡಿ ಕಟ್ಟಡ ,
ಬೆಂಗಳೂರು, ದಿನಾಂಕ-21.12.2013

## ಸುತ್ತೋಲೆ

ಮಾಹಿತಿ ಹಕ್ಕು ಅಧಿನಿಯಮ -2005ರಡಿ ಮಾಹಿತಿ ಕೋರಿ ಸ್ವೀಕೃತವಾಗುವ ಅರ್ಜಿಗಳನ್ನು ಸಾರ್ವಜನಿಕ ಮಾಹಿತಿ ಅಧಿಕಾರಿಯ ಕ್ರಮ ಕೈಗೊಳ್ಳದೆ ಇದ್ದಲ್ಲಿ ಅಥವಾ ಕೈಗೊಂಡ ಕ್ರಮ ಅರ್ಜಿದಾರರಿಗೆ ಇಷ್ಟವಾಗದೇ ಇದ್ದಲ್ಲಿ ಸದರಿ ಅಧಿನಿಯಮದ ಕಲಂ/ 19 (1) ರಲ್ಲಿ ಪ್ರಥಮ ಮೇಲ್ಮನವಿ ಪ್ರಾಧಿಕಾರವೆಂದು ಗುರುತಿಸಿರುವ ಪ್ರಾಧಿಕಾರಗಳಿಗೆ ಮೇಲ್ಮನವಿ ಸಲ್ಲಿಸಲು ಅರ್ಜಿದಾರರಿಗೆ ಅವಕಾಶವಿದ್ದು, ಸದರಿ ಪ್ರಾಧಿಕಾರವು ಮೇಲ್ಮನವಿಯನ್ನು ಸೂಕ್ತ ರೀತಿಯಲ್ಲಿ ನಿಗದಿತ ಅವಧಿಯಲ್ಲಿ ಕ್ರಮ ಕೈಗೊಳ್ಳಬೇಕಾಗಿರುತ್ತದೆ.

ಆದರೆ ಕರ್ನಾಟಕ ಮಾಹಿತಿ ಆಯೋಗದಲ್ಲಿ ದಾಖಲಾಗಿದ್ದ ಪ್ರಕರಣ **ಸಂಖ್ಯೆ:ಕಮಾಆ:12141:ದೂರು:2012** ಶ್ರೀಮತಿ ಸುಭದ್ರಮ್ಮ ಹಾಗೂ ಪ್ರಥಮ ಮೇಲ್ಮನವಿ ಪ್ರಾಧಿಕಾರವಾದ ಕಾರ್ಯನಿರ್ವಾಹಕ ಅಧಿಕಾರಿ. ತಾಲ್ಲೂಕು ಪಂಚಾಯತ್ ದೇವನಹಳ್ಳಿ ಈ ಪ್ರಕರಣದಲ್ಲಿ ಪ್ರಥಮ ಮೇಲ್ಮನವಿ ಪ್ರಾಧಿಕಾರವಾದ ಕಾರ್ಯನಿರ್ವಾಹಕ ಅಧಿಕಾರಿಗಳು ನಿಗಧಿತ ಕಾಲಮಿತಿಯೊಳಗೆ ಮೇಲ್ಮನವಿಯ ಮೇಲೆ ಕ್ರಮ ವಹಿಸಿದೇ ಇರುವುದನ್ನು ಕರ್ನಾಟಕ ಮಾಹಿತಿ ಆಯೋಗ ಗಮನಿಸುತ್ತಾ, ಎಲ್ಲಾ ಮೊದಲನೇ ಮೇಲ್ಮನವಿ ಪ್ರಾಧಿಕಾರಗಳಿಗೆ ಕಟ್ಟು ನಿಟ್ಟಿನ ಸೂಚನೆ ನೀಡಿ ನಿಯಮಾನುಸಾರ ಕಾಲಮಿತಿಯೊಳಗೆ ಮೇಲ್ಮನವಿಗಳನ್ನು ವಿಲೇ ಮಾಡಲು ತಿಳಿಸುವಂತೆ ಸದರಿ ಆಯೋಗವು ನಿರ್ದೇಶಿಸಿದೆ. ಅದ್ದರಿಂದ ಮಾಹಿತಿ ಹಕ್ಕು ಅಧಿನಿಯಮ-2005 ರಡಿ ಪ್ರಥಮ ಮೇಲ್ಮನವಿ ಪ್ರಾಧಿಕಾರವೆಂದು ಗುರುತಿಸಿರುವ ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಪ್ರಾಧಿಕಾರಗಳು ಸ್ವೀಕೃತವಾಗುವ ಮೇಲ್ಮನವಿಗಳನ್ನು ನಿಯಮಾನುಸಾರ ಪರಿಶೀಲಿಸಿ, ನಿಗದಿತ ಅವಧಿಯೊಳಗೆ ಸೂಕ್ತ ಕ್ರಮ ಕೈಗೊಳ್ಳಬೇಕೆಂದು ಕಟ್ಟುನಿಟ್ಟಿನ ಸೂಚನೆಗಳನ್ನು ನೀಡಲಾಗಿದೆ. ಈ ಸೂಚನೆಗಳನ್ನು ಉಲ್ಲಂಘಿಸಿದಲ್ಲಿ ಗಂಭೀರವಾಗಿ ಪರಿಗಣಿಸಲಾಗುವುದು ಎಂದು ಸಹ ತಿಳಿಸಲಾಗಿದೆ.

(ಹೆಚ್ .ಸಿ ರಾಜಪ್ಪ)
ಸರ್ಕಾರದ ಅಧೀನ ಕಾರ್ಯದರ್ಶಿ,
ಗ್ರಾಮೀಣಾಭಿವೃದ್ಧಿ ಮತ್ತು ಪಂ.ರಾಜ್ ಇಲಾಖೆ
(ಸೇವೆಗಳು-ಎ ಮತ್ತು ರವಾನೆ ಶಾಖೆ)

ಗೆ:

1. ಗ್ರಾಅಪ ಇಲಾಖೆಯಲ್ಲಿ ಮಾಹಿತಿ ಹಕ್ಕುಅಧಿನಿಯಮದ ಎಲ್ಲಾ ಮೇಲ್ಮನವಿ ಪ್ರಾಧಿಕಾರಗಳು

ಪ್ರತಿ:-

1. ಪ್ರಧಾನ ಕಾರ್ಯದರ್ಶಿಗಳ /ಕಾರ್ಯದರ್ಶಿಗಳ ಆಪ್ತ ಕಾರ್ಯದರ್ಶಿಗಳು ಗ್ರಾಮೀಣಾಭಿವೃದ್ಧಿಮತ್ತು ಪಂ.ರಾಜ್ ಇಲಾಖೆ
2. ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆಯ ಎಲ್ಲಾ ನಿರ್ದೇಶಕರುಗಳು/ ಅಧೀನ ಕಾರ್ಯದರ್ಶಿಗಳು.
3. ರಾಜ್ಯ ಮುಖ್ಯ ಮಾಹಿತಿ ಆಯುಕ್ತರ ಆಪ್ತ ಸಹಾಯಕರು ಕರ್ನಾಟಕ ಮಾಹಿತಿ ಆಯೋಗ ಬಹುಮಹಡಿ ಕಟ್ಟಡ, ಬೆಂಗಳೂರು (ಪ್ರಕರಣ ಕಮಾಆ: 12414: ದೂರು: 2012 ಸಂಬಂಧಿಸಿದಂತೆ).
4. ಮುಖ್ಯ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಇಲಾಖೆ, ಬೆಂಗಳೂರು.
5. ಮುಖ್ಯ ಕಾರ್ಯಾಚರಣೆ ಅಧಿಕಾರಿ, ಕೆ.ಆರ್. ಆರ್.ಡಿ.ಎ ರಾಜ್ ಕುಮಾರ್ ರಸ್ತೆ, ಬೆಂಗಳೂರು.
6. ವ್ಯವಸ್ಥಾಪಕ ನಿರ್ದೇಶಕರು ಕೆ.ಆರ್.ಡಿ.ಐ.ಎಲ್ ಬೆಂಗಳೂರು.
7. ನಿರ್ದೇಶಕರು, ಗ್ರಾಮೀಣಾ ನೀರು ಸರಬರಾಜು ಮತ್ತು ನೈರ್ಮಲ್ಯ ಸಂಸ್ಥೆ, ಕಾವೇರಿ ಭವನ, ಬೆಂಗಳೂರು.
8. ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು.
9. ಎಲ್ಲಾ ಅಧೀಕ್ಷಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ವೃತ್ತ,
10. ಎಲ್ಲಾ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್, ಪಂಚಾಯತ್ ರಆಜ್ ಇಂಜಿನಿಯರಿಂಗ್ ವಿಭಾಗಗಳು.
11. ಎಲ್ಲಾ ಕಾರ್ಯನಿರ್ವಾಹಕ ಅಧಿಕಾರಿಗಳು, ತಾಲ್ಲೂಕು ಪಂಚಾಯತ್‌ಗಳು.
12. ಎಲ್ಲಾ ಸಹಾಯಕ ಕಾರ್ಯಪಾಲಕ ಇಂಜಿನಿಯರ್, ಪಂಚಾಯತ್ ರಾಜ್ ಇಂಜಿನಿಯರಿಂಗ್ ಉಪ ವಿಭಾಗಗಳು.
13. ಕಂಪ್ಯೂಟರ್ ಸೆಲ್/ ಶಾಖಾ ರಕ್ಷಾ ಕಡತ ಹೆಚ್ಚುವರಿ ಪ್ರತಿ.